ಕರ್ನಾಟಕ ವಿಧಾನ ಸಭೆ

45 ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ)
ಜಲಸಂಪನ್ಮೂಲ ಸಚಿವರು

ಅ) ಕೊಪ್ಪಳ ತಾಲ್ಲೂಕಿನ ಹಿರೇಹಳ್ಳ ಅಣೆಕಟ್ಟನ್ನು ಒಂದು ಮೀಟರ್ ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ;

ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಹಾಗಿದ್ದಲ್ಲಿ, ಕಾಮಗಾರಿಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು;

ತಾಂತ್ರಿಕ ಸಲಹಾ ಸಮಿತಿಯ ಅನುಮೋದನೆ ಪಡೆದ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ಇ) ಸದರಿ ಅಣೆಕಟ್ಟನ್ನು ಒಂದು ಮೀಟರ್ ಹೆಚ್ಚಿಸಲು ಹಿಂದಿನ ಮುಖ್ಯಮಂತ್ರಿಗಳು ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು;

ತಾಂತ್ರಿಕ ಸಲಹಾ ಸಮಿತಿಯು ಎತ್ತಿರುವ ಆಕ್ಷೇಪಣೆಗಳಿಗೆ ಅನುಸರಣಾ ವರದಿಯನ್ನು ಸಿದ್ಧಪಡಿಸಲಾಗಿದ್ದು ಸಮಿತಿಯ ಮುಂದೆ ಮತ್ತೊಮ್ಮೆ ಮಂಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಈ) ಹಿರೇಹಳ್ಳಿ ಅಣೆಕಟ್ಟನ್ನು ಒಂದು ಮೀಟರ್ ಹೆಚ್ಚಿಸಲು ಪ್ರಸಕ್ತ ಸಾಲಿನಲ್ಲಿ ಸರ್ಕಾರ ಮಂಜೂರು ಮಾಡಿದ ಅನುದಾನದ ಮೊತ್ತ ಎಷ್ಟು; (ವಿವರಗಳನ್ನು ನೀಡುವುದು)

ತಾಂತ್ರಿಕ ಸಲಹಾ ಸಮಿತಿಯು ಒಪ್ಪಿದ ಮೇಲೆ ಆಡಳಿತಾತ್ಮಕ ಅನುಮೋದನೆ ನೀಡುವ ಜೊತೆಗೆ ಅನುದಾನ ಮಂಜೂರು ಮಾಡಲಾಗುವುದು.

ಸಂಖ್ಯೆ: ಜಸಂಇ:26:ಎಂಎಲ್ಎ:2009

(ಬಸವರಾಜ ಬೊಮ್ಮಾಯಿ)
ಜಲಸಂಪನ್ಮೂಲ ಸಚಿವರು.

ಕರ್ನಾಟಕ ವಿಧಾನ ಸಭೆ

323 ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬಾರಾವ್
ಮಾನ್ಯ ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು.

ಅ) ಜಮಖಂಡಿ ತಾಲ್ಲೂಕಿನ ಚಿಕ್ಕಲಕ್ಕಿ ಗ್ರಾಮಕ್ಕೆ ಕೃಷ್ಣಾ ನದಿಯಿಂದ ಏತ ನೀರಾವರಿ ಯೋಜನೆ ಮೂಲಕ ಎಷ್ಟು ಎಕರೆ ಜಮೀನಿಗೆ ನೀರಾವರಿ ಸೌಲಭ್ಯ ದೊರೆಯುತ್ತದೆ;

5000 ಎಕರೆಗೆ ನೀರಾವರಿ ಸೌಲಭ್ಯ ಒದಗಿಸಲು ಯೋಜಿಸಲಾಗಿದೆ.